ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

---

ಸಂಖ್ಯೆ: ಎಡಿಎಂ-2(4)/ಶಾ.ಪ್ರಾ.03/2020-21 ದಿನಾಂಕ-26-02-2021

**ಸುತ್ತೋಲೆ**

ವಿಷಯ:- 2020-21 ನೇ ಸಾಲಿನಲ್ಲಿ ಪ್ರಾಥಮಿಕ ಶಾಲೆಯಲ್ಲಿ ವಿದ್ಯಾರ್ಥಿಗಳನ್ನು ಪೂರ್ಣ ಪ್ರಮಾಣದಲ್ಲಿ ದಾಖಲಾತಿ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ:- 1. ಈ ಕಛೇರಿ ಸುತ್ತೋಲೆ ಸಂಖ್ಯೆ: ಎಡಿಎಂ-2(4) ಮ.ಶಿ.ಹ-22/2020-21 ದಿನಾಂಕ.08-01-2021.

2. ಈ ಕಛೇರಿ ಸುತ್ತೋಲೆ ಸಂಖ್ಯೆ: ಸಿ4(6) ಸಪ್ರೌಶಾ/ಶಾ.ಕಾ.ಪ್ರ-47/2020-21 ದಿನಾಂಕ.19-02-2021.

3. ಈ ಕಛೇರಿ ಸುತ್ತೋಲೆ ಸಂಖ್ಯೆ. ಸಿ7(2)ಪ್ರಾಶಿಅ:ಶುಲ್ಕ:30/2020-21 ದಿನಾಂಕ 19-02-2021

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕೋವಿಡ್-19 ವೈರಾಣು ದೇಶದಾದ್ಯಂತ ವ್ಯಾಪಕವಾಗಿ ಹರಡಿದ ಹಿನ್ನಲೆಯಲ್ಲಿ ಶಾಲಾ ಶೈಕ್ಷಣಿಕ ಚಟುವಟಿಕೆಗಳನ್ನು ನಿಗದಿಗೊಳಿಸಿದ ಕಾರ್ಯಸೂಚಿಯಂತೆ ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸವ ಸಲುವಾಗಿ ಉಲ್ಲಖ (1) ರಂತೆ 6 ರಿಂದ 14 ವರ್ಷ ವಯೋಮಿತಿಯ ಶಾಲೆಯಿಂದ ಹೊರಗುಳಿದ ಮಕ್ಕಳನ್ನು – ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಗೊಂಬೆ ಮತ್ತು ಹೂವುಗಳನ್ನು ಮಾರುವ ಮಕ್ಕಳು, ಪರಿತ್ಯಕ್ತ ಮಕ್ಕಳು, ಬೀದಿ ಮಕ್ಕಳು, ಅನಾಥ ಮಕ್ಕಳು ಇತ್ಯಾದಿ ಮಕ್ಕಳನ್ನು ಗುರುತಿಸಿ, ಇಂತಹ ಗುರುತಿಸಿರುವ ಮಕ್ಕಳನ್ನು ಶಾಲೆಗೆ ದಾಖಲು ಮಾಡಿಕೊಳ್ಳುವ ಸಂದರ್ಭದಲ್ಲಿ, ಜನನ ಪ್ರಮಾಣ ಪತ್ರ ಮತ್ತು ವರ್ಗಾವಣೆ ಪತ್ರಗಳನ್ನು ಮಕ್ಕಳ ಪೋಷಕರ/ಸಂಬಂಧಿಕರ ಬಳಿ ಲಭ್ಯವಿಲ್ಲದಿದ್ದಲ್ಲಿ & ಶಾಲೆಗೆ ದಾಖಲಾಗಲು ಬರುವ ಮಗುವಿನಿಂದ ದಾಖಲೆಗಳನ್ನು ಕೊಡುವಂತೆ ಒತ್ತಾಯ ಮಾಡದೆ, ಶಾಲಾ ಮುಖ್ಯವಾಹಿನಿಗೆ ತರುವ ದೃಷ್ಟಿಯಿಂದ ಶೈಕ್ಷಣಿಕ ವರ್ಷದ ಮಧ್ಯದಲ್ಲಿಯೂ ಸಹ ಪ್ರಾಥಮಿಕ 1 ರಿಂದ 8 ನೇ ತರಗತಿಗೆ ಪ್ರವೇಶ ನೀಡಲು ಸೂಚನೆ ನೀಡಲಾಗಿದೆ. ಈ ಮಕ್ಕಳನ್ನು ಶಾಲೆಗೆ ದಾಖಲು ಮಾಡಿ, ನಂತರ ಕಡ್ಡಾಯ ಪ್ರಾಥಮಿಕ ಶಿಕ್ಷಣದ ವಿದ್ಯಾವಿಕಾಸ ಯೋಜನೆಯ ಅಡಿಯಲ್ಲಿ ಉಚಿತ ಪಠ್ಯಪುಸ್ತಕ, ಸಮವಸ್ತ್ರ, ಮಧ್ಯಾಹ್ನದ ಬಿಸಿಯೂಟ, ಶೂ ಸಾಕ್ಸ್ ವಿತರಣೆ ಹಾಗೂ ಇತ್ಯಾದಿ ಪ್ರೋತ್ಸಾಹದಾಯಕ ಯೋಜನೆಗಳನ್ನು ಒದಗಿಸಲು ಸಹ ಸೂಚಿಸಲಾಗಿದೆ.

ಉಲ್ಲೆಖ-2 ರಂತೆ ರಾಜ್ಯದಲ್ಲಿನ ಸರ್ಕಾರಿ, ಅನುದಾನ ಮತ್ತು ಅನುದಾನ ರಹಿತ ಶಾಲೆಗಳಲ್ಲಿನ 6 ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗೆ ಶಾಲೆಗಳನ್ನು ಪೂರ್ಣ ಪ್ರಮಾಣದಲ್ಲಿ ಪುನರಾರಂಭ ಮಾಡುವ ಕುರಿತು ಬೆಂಗಳೂರು ನಗರದ ಬಿ.ಬಿ.ಎಂ.ಪಿ ವ್ಯಾಪ್ತಿ ಮತ್ತು ಕೇರಳ ರಾಜ್ಯದ ಗಡಿಭಾಗಕ್ಕೆ ಹೊಂದಿಕೊಂಡ ಪ್ರದೇಶಗಳನ್ನು ಹೊರತುಪಡಿಸಿ ಉಳಿದೆಲ್ಲಾ ಕಡೆ 6ನೇ ತರಗತಿಯಿಂದ 8ನೇ ತರಗತಿಯವರೆಗೆ ಪ್ರತಿ ದಿನ ಪೂರ್ಣಾವಧಿ ಶಾಲೆಯನ್ನು ನಡೆಸಲು ಹಾಗೂ ಬೆಂಗಳೂರು ನಗರದ ಬಿ.ಬಿ.ಎಂ.ಪಿ ವ್ಯಾಪ್ತಿ ಮತ್ತು ಕೇರಳ ರಾಜ್ಯದ ಗಡಿಭಾಗಕ್ಕೆ ಹೊಂದಿಕೊಂಡ ಪ್ರದೇಶಗಳಲ್ಲಿ 8ನೇ ತರಗತಿ ಪೂರ್ಣಾವಧಿ ಶಾಲೆ ಪ್ರಾರಂಭ 6 ಮತ್ತು 7ನೇ ತರಗತಿಗಳು ವಿದ್ಯಾಗಮ ಕಾರ್ಯಕ್ರಮ ಮುಂದುವರಿಸುವಂತೆ ತಿಳಿಸಲಾಗಿದೆ.

ಉಲ್ಲೇಖ-3 ರಂತೆ ರಾಜ್ಯದ ಶಾಲೆಗಳಲ್ಲಿ ಕೋವಿಡ್-19 ಹಿನ್ನಲೆಯಲ್ಲಿ ಪ್ರಸ್ತುತ 2020-21ನೇ ಶೈಕ್ಷಣಿಕ ಸಾಲಿನಲ್ಲಿ ಇದುವರೆವಿಗೂ ಶಾಲೆಗಳಿಗೆ ಪೂರ್ಣ ಪ್ರಮಾಣದಲ್ಲಿ ವಿದ್ಯಾರ್ಥಿಗಳು ದಾಖಲಾತಿಯಾಗಿಲ್ಲದ ಕಾರಣ ದಿನಾಂಕ 30-03-2021ರವರಗೆ ಶಾಲಾ ಪ್ರವೇಶ ದಾಖಲಾತಿ ಅವಧಿಯನ್ನು ವಿಸ್ತರಣೆ ಮಾಡಲಾಗಿದೆ.

2019-20 ನೇ ಸಾಲಿನ ಅಂಗನವಾಡಿ ಮಕ್ಕಳ ದಾಖಲಾತಿ ವಿವರಗಳನ್ನು ಪಡೆದು 2020-21ನೇ ಸಾಲಿನಲ್ಲಿ ಈ ಎಲ್ಲಾ ಮಕ್ಕಳನ್ನು & ಪ್ರತ್ಯೇಕವಾಗಿ ಅಂಗನವಾಡಿಗಳಿಂದ ಹೊರಗುಳಿದ ಅಂದರೆ ಮನೆ ಮನೆ ಸಮೀಕ್ಷೆಯಲ್ಲಿ ಗುರುತಿಸಿದ ಶಾಲಾ ದಾಖಲಾತಿ ಅರ್ಹ ವಯೋಮಾನದ ಮಕ್ಕಳನ್ನು ಶಾಲಾ ಮುಖ್ಯವಾಹಿನಿಗೆ ತರಲು ಎಲ್ಲಾ ಅಗತ್ಯ ಕ್ರಮ ವಹಿಸಲು ತಿಳಿಸಿದೆ.

ಸುತ್ತೋಲೆಯಲ್ಲಿರುವ ಮೇಲ್ಕಂಡ ಎಲ್ಲಾ ಅಂಶಗಳನ್ನು ಗಮನದಲ್ಲಿರಿಸಿಕೊಂಡು ರಾಜ್ಯದಲ್ಲಿನ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿ ವಿದ್ಯಾರ್ಥಿಗಳನ್ನು ಶಾಲೆಯಿಂದ ಹೊರಗುಳಿಯದಂತೆ ಪೂರ್ಣ ಪ್ರಮಾಣದಲ್ಲಿ ದಾಖಲಾತಿ ಮಾಡಿಕೊಳ್ಳಲು ಮತ್ತು ಹಾಜರಾತಿ ಮುಂದುವರೆಸಲು ಎಲ್ಲಾ ಅಗತ್ಯ ಕ್ರಮ ವಹಿಸಲು ಉಪನಿರ್ದೇಶಕರು(ಆಡಳಿತ) ಹಾಗೂ ಉಪನಿರ್ದೇಶಕರು(ಅಭಿವೃದ್ಧಿ) ಹಾಗೂ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚಿಸಿದೆ.

Sd/-
(ಪ್ರಸನ್ನ ಕುಮಾರ್ ಎಂ.ಎಸ್)

**ಇವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು (ಅಭಿವೃದ್ಧಿ) ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಹಿಂಬಾಲಿಸುವ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಉಪನಿರ್ದೇಶಕರು (ಆಡಳಿತ ಮತ್ತು ಅಭೀವೃದ್ಧಿ) ರವರ ಮೂಲಕ ಮುಂದಿನ ಸೂಕ್ತ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಮುಂದಿನ ಕ್ರಮಕ್ಕಾಗೆ.

ಪ್ರತಿ ಗಳು

01. ರಾಜ್ಯ ಯೋಜನಾ ನಿರ್ದೇಶಕರು ಎಸ್.ಎಸ್.ಕೆ ರವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ
02. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ
03. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕಕರುಗಳಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ
04. ಸಹ ನಿರ್ದೇಶಕರು ಮಧ್ಯಾಹ್ನ ಉಪಹಾರ ಯೋಜನೆ ಬೆಂಗಳೂರು ರವರಿಗೆ. ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
05. ಕಛೇರಿ ಪ್ರತಿ

(ಮಾನ್ಯ ಆಯುಕ್ತರ ಅನುಮೋದನೆ ಮೇರೆಗೆ)

(ಪ್ರಸನ್ನ ಕುಮಾರ್ ಎಂ.ಎಸ್)
ನಿರ್ದೇಶಕರು
ಪ್ರಾಥಮಿಕ ಶಿಕ್ಷಣ